## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಂ.ಎಸ್.ಮೇಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಮುಂಡಗೋಡ, ರವರ ವಿರುದ್ಧದ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳ ನೇಮಕಾತಿ ಬಗ್ಗೆ ಆದೇಶ.

ಓದಲಾಗಿದೆ:
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ರವರ ಪತ್ರ ಸಂಖ್ಯೆ: ಜಿಪಂಆ/ಬಿಸಿಎಂ/22/2013-14 ದಿನಾಂಕ: 21-06-2013 ಮತ್ತು 17-07-2013.
2. ಸರ್ಕಾರದ ಸಮಸಂಖ್ಯೆಯ ಆದೇಶ ದಿನಾಂಕ: 04-09-2013.
3. ಸರ್ಕಾರದ ಸಮಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ: 11-03-2014.
4. ಶ್ರೀ ಎಂ.ಎಸ್.ಮೇಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಂಡಗೋಡ ಇವರ ಲಿಖಿತ ಹೇಳಿಕೆ ದಿನಾಂಕ: 28-05-2014.

------

ಪ್ರಸ್ತಾವನೆ:

ಮುಂಡಗೋಡ, ತಾಲ್ಲೂಕು ಪಂಚಾಯಿತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಂ.ಎಸ್.ಮೇಟಿ ಇವರು ದಿನಾಂಕ: 18-06-2013 ರಂದು ಬೆಳಗಿನ ಜಾವ 1-15 ನಿಮಿಷಕ್ಕೆ ಹಿಂದುಳಿದ ವರ್ಗಗಳ ಮಾಳಗಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪಾನಮತ್ತರಾಗಿ ಹೋಗಿ, ವಿದ್ಯಾರ್ಥಿ ನಿಲಯದ ಬಾಗಿಲು ತೆರೆಯುವಂತೆ ವಿದ್ಯಾರ್ಥಿನಿಯರುಗಳಿಗೆ ಹಾಗೂ ಸಿಬ್ಬಂದಿಗಳಿಗೆ ಬೆದರಿಕೆ ಹಾಕಿದ್ದ ಹಾಗೂ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ ಆರೋಪಕ್ಕೆ ಸಂಬಂಧಿಸಿದಂತೆ ಅಧಿಕಾರಿಯ ವಿರುದ್ಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸದರಿ ಅಧಿಕಾರಿಯನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು. ಅಧಿಕಾರಿಯ ವಿರುದ್ಧದ ಒಟ್ಟು 4 ಆರೋಪಗಳಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ-11 ರನ್ವಯ ದೋಷಾರೋಪಣ ಪಟ್ಟಿ-1-4 ನ್ನು ಜಾರಿ ಮಾಡಲಾದ ಮೇಲೆ (3) ರಲ್ಲಿ ಓದಲಾದ ಕಾರಣ ಕೇಳುವ ನೋಟೀಸಿಗೆ ಅಧಿಕಾರಿಯು ಮೇಲೆ ಓದಲಾದ (4) ರಲ್ಲಿ ನೀಡಲಾದ ಲಿಖಿತ ಹೇಳಿಕೆಯಲ್ಲಿ, ತಮ್ಮ ವಿರುದ್ಧ ಹೊರಿಸಲಾಗಿರುವ ಎಲ್ಲ ಆಪಾದನೆಗಳು ಸತ್ಯಕ್ಕೆ ದೂರವಾಗಿರುತ್ತದೆ ಎಂದು, ತಮ್ಮ ತೇಜೋವಧೆ ಮಾಡಲು ವಿನಾ: ಕಾರಣ ಕೆಲವೊಂದು ವರ್ಗದವರು ಹಾಗೂ ಸಿಬ್ಬಂದಿಯವರು ಇಂತಹ ಸುಳ್ಳು ಹಾಗೂ ಖೋಟಾ ಆಪಾದನೆಗಳನ್ನು ಮಾಡಲಾಗಿರುತ್ತದೆ ಎಂದು ತಿಳಿಸುತ್ತಾ, ತಮ್ಮ ವಿರುದ್ಧ ಮಾಡಿರುವ ಆಪಾದನೆಗಳನ್ನು ಕೈಬಿಡುವಂತೆ ಕೋರಿರುತ್ತಾರೆ.

ಅಧಿಕಾರಿಯ ಲಿಖಿತ ಹೇಳಿಕೆಯನ್ನು ನಿಯಮಾನುಸಾರ ಪರಿಶೀಲಿಸಲಾಗಿ, ಅಧಿಕಾರಿಯ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿ 1957ರ ನಿಯಮ-11ರ ವಿಧಿವಿಧಾನದನ್ವಯ ನಡೆಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

### ಆದೇಶ ಸಂಖ್ಯೆ: ಗ್ರಾಅಪ 97 ವಿಸೇಜಿ 2013, ಬೆಂಗಳೂರು, ದಿನಾಂಕ: 03-06-2015.

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ, ಮುಂಡಗೋಡ ತಾಲ್ಲೂಕ ಪಂಚಾಯಿತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಂ.ಎಸ್.ಮೇಟಿ, ಇವರ ವಿರುದ್ಧ ದಿನಾಂಕ: 11-03-2014ರ ಕಾರಣ ಕೇಳುವ

ನೋಟೀಸಿನೊಂದಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957ರ ನಿಯಮ-11 ರನ್ವಯ ಮಾಡಿರುವ ದೋಷಾರೋಪಣೆಗಳ ಕುರಿತು, ಅದೇ ನಿಯಮಾವಳಿಗಳ ನಿಯಮ-11 ರನ್ವಯ ವಿವರವಾದ ವಿಚಾರಣೆಯನ್ನು ನಡೆಸಲು, ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎಂ.ಎನ್.ಗದಗ ಇವರನ್ನು ಅದೇ ನಿಯಮಾವಳಿಗಳ ನಿಯಮ-11(2) ರನ್ವಯ ವಿಚಾರಣಾಧಿಕಾರಿಯನ್ನಾಗಿ ಮತ್ತು ನಿಯಮ-11(5)(ಸಿ) ರನ್ವಯ ಸಹಾಯಕ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-11 ರಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ, ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ಸೇಇವಿ/2014 ದಿನಾಂಕ: 28-09-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ.15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
4. ಶ್ರೀ ಎಂ.ಎನ್.ಗದಗ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ.
5. ಸಹಾಯಕ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆ.
7. ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-), ಗ್ರಾ.ಅ. & ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

Sbp/-